# ಉಪತಹಶೀಲ್ದಾರವರ ನ್ಯಾಯಾಲಯ, ಕೋಗಳಿ, ಹ.ಬೊ.ಹಳ್ಳಿ ತಾಲೂಕು.

ಸಂ/ಕಂ/ಪಹಣಿ/ವಿವಾದ/101/2015-16

ದಿನಾಂಕ:20.10.2016

ಉಪಸ್ಥಿತರು:-ವಿ.ಹೆಚ್.ಮಲ್ಲಿಕಾರ್ಜುನ,
ಉಪ ತಹಶೀಲ್ದಾರರು,
ನಾಡ ಕಾರ್ಯಾಲಯ, ಕೋಗಳಿ

| ಅರ್ಜಿದಾರರು | ತಕರಾರುದಾರರು |
|---|---|
| ಶ್ರೀಮತಿ ಕೆ.ಸುಲೋಚನಮ್ಮ ಗಂಡ ಕೆ.ಗಂಗಪ್ಪ<br>ಗ್ರಾಮ:-ಬೆಣಕಲ್ಲು ತಾ:-ಹೆಚ್.ಬಿ.ಹಳ್ಳಿ | ಶ್ರೀಮತಿ ಕೊಟ್ರಮ್ಮ ಗಂಡ ನಾಗಪ್ಪ<br>ಗ್ರಾಮ:-ಮರಿಯಮ್ಮನಹಳ್ಳಿ ತಾ:-ಹೊಸಪೇಟೆ<br>[ಕೊಟ್ರೇಶ ಹಿರೇಮಠ, ವಕೀಲರು, ಹೊಸಪೇಟೆ] |

**ವಿವಾದಿತ ಜಮೀನಿನ ವಿವರ:**

| ಕ್ರ.ಸಂ. | ತಾಲೂಕು | ಗ್ರಾಮ | ಸ.ನಂ. | ವಿಸ್ತೀರ್ಣ(ಎಕರೆಗಳಲ್ಲಿ) | ತರಹೆ |
|---|---|---|---|---|---|
| 1. | ಹಗರಿಬೊಮ್ಮನಹಳ್ಳಿ | ಬೆಣಕಲ್ಲು | 392/ಇ | 0-83 | ಖುಷ್ಕಿ |

**ಪೀಠಿಕೆ:-**

ಬಳ್ಳಾರಿ ಜಿಲ್ಲೆ ಹಗರಿಬೊಮ್ಮನಹಳ್ಳಿ ತಾಲೂಕಿನ ಬೆಣಕಲ್ಲು ಗ್ರಾಮದ ವಿವಾದಿತ ಜಮೀನಿಗೆ ಸಂಬಂಧಿಸಿದಂತೆ, ಬಳ್ಳಾರಿ ಜಿಲ್ಲೆ ಹಗರಿಬೊಮ್ಮನಹಳ್ಳಿ ತಾಲೂಕಿನ ಬೆಣಕಲ್ಲು ಗ್ರಾಮದ ನಿವಾಸಿಯಾದ ಶ್ರೀಮತಿ ಕೆ.ಸುಲೋಚನಮ್ಮ ಗಂಡ ಕೆ.ಗಂಗಪ್ಪ ಇವರು ಬಳ್ಳಾರಿ ಜಿಲ್ಲೆ ಹಗರಿಬೊಮ್ಮನಹಳ್ಳಿ ತಾಲೂಕಿನ ಬೆಣಕಲ್ಲು ಗ್ರಾಮದ ಕೆ.ಲೆಕ್ಕಮ್ಮ ಗಂಡ ಲೇಟ್ ಮೂಗಪ್ಪ ಇವರಿಂದ ನೋಂದಾಯಿತ ಕ್ರಯ ದಸ್ತಾವೇಜು ಸಂಖ್ಯೆ ಹೆಚ್.ಬಿ.ಹೆಚ್-1-03913-2015-2016 ದಿನಾಂಕ:05.02.2016 ರಂದು ಮೊತ್ತ ರೂ:49,000/-ಕ್ಕೆ ಖರೀದಿಸಿರುತ್ತಾರೆ. ಗ್ರಾಮದಲ್ಲಿ ನಮೂನೆ-21ರ ನೋಟೀಸನ್ನು ದಿನಾಂಕ:06.02.2016 ರಂದು ಜಾರಿಮಾಡಲಾಗಿ, ನಿಗದಿತ ಅವಧಿಯೊಳಗೆ ಅಂದರೆ ದಿನಾಂಕ:22.02.2016 ರಂದು ಶ್ರೀಮತಿ ಕೊಟ್ರಮ್ಮ ಗಂಡ ನಾಗಪ್ಪ ಇವರು ತಕರಾರು ಅರ್ಜಿಯನ್ನು ಸಲ್ಲಿಸಿರುತ್ತಾರೆ. ಕಾರಣ, ಎಂ.ಆರ್.ನಂ.88/15-16 ರ ಕಡತವು ವಿವಾದಾಸ್ಪದ ಪ್ರಕರಣವೆಂದು ಪರಿಗಣಿಸಿ ಕಂದಾಯ ನಿರೀಕ್ಷಕರು, ಕೋಗಳಿ ಇವರು ಈ ಕಾರ್ಯಾಲಯಕ್ಕೆ ವರದಿ ಸಲ್ಲಿಸಿರುತ್ತಾರೆ. ಉಭಯ ಪಕ್ಷಕಾರರಿಗೆ ದಿನಾಂಕ:03.05.2016ಕ್ಕೆ ವಿಚಾರಣೆಗೆ ಹಾಜರಾಗಲು ನೋಟೀಸನ್ನು ಜಾರಿ ಮಾಡಲಾಯಿತು.

ಪ್ರಕರಣವನ್ನು ದಿನಾಂಕ:03.05.2016 ರಿಂದ 22.09.2016 ರವರೆಗೆ ವಿಚಾರಣೆಯನ್ನು ಮಾಡಲಾಯಿತು. ಅರ್ಜಿದಾರರು ಹಾಜರಾಗಿರುತ್ತಾರೆ. ಅರ್ಜಿದಾರರು ಹಾಜರಾಗಿ ಹೇಳುವಂತೆ; ಸದರಿ ಜಮೀನು ನೋಂದಾಯಿತ ಕ್ರಯ ಪ್ರಕಾರ ನನ್ನ ಹೆಸರಿಗೆ ಹಕ್ಕು ಬದಲಾವಣೆ ಮಾಡಲು ಮೌಖಿಕವಾಗಿ ಹೇಳಿಕೆಯನ್ನು ನೀಡಿರುತ್ತಾರೆ. ತಕರಾರುದಾರರು ದಿನಾಂಕ:03.05.2016 ರಿಂದ 27.07.2016 ರವರೆಗೆ ಸತತವಾಗಿ ಗೈರುಹಾಜರಾಗಿರುತ್ತಾರೆ.

ಮುಂದುವರೆದು ದಿನಾಂಕ:27.07.2016 ರಂದು ಅರ್ಜಿದಾರರು ಹಾಜರಾಗಿ, ಡೈಯಗ್ಲೇಟ್, ಕೈಬರಹ ಪಹಣಿ ಪತ್ರಿಕೆಗಳು ಹಾಜರುಪಡಿಸಿರುತ್ತಾರೆ.

ಪ್ರಕರಣದಲ್ಲಿ ದಿನಾಂಕ:11.08.2016 ರಂದು ಅರ್ಜಿದಾರರು ಹಾಜರಾಗಿರುತ್ತಾರೆ. ಮತ್ತು ತಕರಾರುದಾರರ ಪರ ಶ್ರೀ ಕೊಟ್ರೇಶ ಹಿರೇಮಠ, ವಕೀಲರು, ಹೊಸಪೇಟೆ ಇವರು ಮುಂದಿನ ದಿನಾಂಕಕ್ಕೆ ವಕಾಲತ್ತು ಅರ್ಜಿಯನ್ನು ಸಲ್ಲಿಸುವುದಾಗಿ ಹೇಳಿಕೆಯನ್ನು ಮೌಖಿಕವಾಗಿ ನೀಡಿರುತ್ತಾರೆ.

ಪ್ರಕರಣದಲ್ಲಿ ದಿನಾಂಕ:08.09.2016 ರಂದು ಅರ್ಜಿದಾರರು ಮತ್ತು ತಕರಾರುದಾರರ ಪರ ಶ್ರೀ ಕೊಟ್ರೇಶ ಹಿರೇಮಠ, ವಕೀಲರು, ಹೊಸಪೇಟೆ ಇವರು ತಮ್ಮ ವಕಾಲತ್ತು ಅರ್ಜಿಯನ್ನು ಶ್ರೀ ಕೊಟ್ರೇಶ, ವಕೀಲರು ಹೊಸಪೇಟೆ ಇವರ ದ್ವಾರ ಸಲ್ಲಿಸಿರುತ್ತಾರೆ.

ಪ್ರಕರಣದಲ್ಲಿ ದಿನಾಂಕ:22.09.2016 ರಂದು ಅರ್ಜಿದಾರರು ಹಾಜರಾಗಿರುತ್ತಾರೆ ಮತ್ತು ತಕರಾರುದಾರರು ಗೈರುಹಾಜರಾಗಿರುತ್ತಾರೆ.

ಪ್ರಕರಣದಲ್ಲಿ ಅರ್ಜಿದಾರರು ಮತ್ತು ತಕರಾರುದಾರು ನೀಡಿದ ಹೇಳಿಕೆ ಮತ್ತು ದಾಖಲೆಗಳನ್ನು ಪರಿಶೀಲನೆ ಮಾಡಲಾಗಿ, ಕ್ರಯದಾರರಾದ ಬಳ್ಳಾರಿ ಜಿಲ್ಲೆ ಹಗರಿಬೊಮ್ಮನಹಳ್ಳಿ ತಾಲೂಕಿನ ಬೆಣಕಲ್ಲು ಗ್ರಾಮದ ನಿವಾಸಿಯಾದ ಶ್ರೀಮತಿ ಕೆ.ಸುಲೋಚನಮ್ಮ ಗಂಡ ಕೆ.ಗಂಗಪ್ಪ ಇವರು ಬಳ್ಳಾರಿ ಜಿಲ್ಲೆ ಹಗರಿಬೊಮ್ಮನಹಳ್ಳಿ ತಾಲೂಕಿನ ಬೆಣಕಲ್ಲು ಗ್ರಾಮದ ಕೆ.ಲೆಕ್ಕಮ್ಮ ಗಂಡ ಲೇಟ್ ಮೂಗಪ್ಪ ಇವರಿಂದ ನೋಂದಾಯಿತ ಕ್ರಯ ದಸ್ತಾವೇಜು ಸಂಖ್ಯೆ ಹೆಚ್.ಬಿ.ಹೆಚ್-1-03913-2015-2016 ದಿನಾಂಕ:05.02.2016 ರಂದು ಮೊತ್ತ ರೂ:49,000/-ಕ್ಕೆ ಖರೀದಿಸಿರುವುದು ಕಂಡುಬಂದಿರುತ್ತದೆ. ಹಾಗೂ ಸದರಿ ಜಮೀನಿಗೆ ಸಂಬಂಧಿಸಿದ 1968-69 ರಿಂದ 1998-99 ರವರೆಗೆ ಕೈಬರಹ ಪಹಣಿ ಪತ್ರಿಕೆಗಳು ಮತ್ತು ಡೈಯಗ್ಲಾಟ್ ಪರಿಶೀಲಿಸಲಾಗಿ, ಡೈಯಗ್ಲಾಟ್ ಪ್ರತಿಯಲ್ಲಿ ಜಿ.ಡಿ.ಎಂದು ನಮೂದಾಗಿರುತ್ತದೆ. ಹಾಗೂ ಕರ್ನಾಟಕ ಭೂಕಂದಾಯ ಕಾಯ್ದೆ 1964ರ ಕಲಂ 128 ಮತ್ತು 129 ರನ್ವಯ ನೋಂದಾಯಿತ ಕ್ರಯ ಪ್ರಕಾರ ಕ್ರಯದಾರರ ಹೆಸರಿಗೆ ಹಕ್ಕುಬದಲಾವಣೆ ಮಾಡಲು ಈ ಕೆಳಕಂಡಂತೆ ಆದೇಶ;

## -:ಆದೇಶ:-

ಪೀಠಿಕೆಯಲ್ಲಿ ವಿವರಿಸಿದ ಸಂದರ್ಭ, ವಾಸ್ತವಾಂಶ, ಹಿನ್ನಲೆ ಮತ್ತು ಕಾರಣಗಳ ಆಧಾರದ ಮೇಲೆ ಹಾಗೂ ಕರ್ನಾಟಕ ಭೂಕಂದಾಯ ಕಾಯ್ದೆ 1964ರ ಕಲಂ 128 ಮತ್ತು 129 ರನ್ವಯ ಮತ್ತು ಎಂ.ಆರ್.ನಂ.88/2015-16 ರ ಪ್ರಕಾರ, ಬೆಣಕಲ್ಲು ಗ್ರಾಮದ ಸ.ನಂ. 392/ಇ ವಿಸ್ತೀರ್ಣ 0-83 ಎಕರೆ ಜಮೀನು ಕ್ರಯದಾರರಾದ ಶ್ರೀಮತಿ ಕೆ.ಸುಲೋಚನಮ್ಮ ಗಂಡ ಕೆ.ಗಂಗಪ್ಪ ಇವರ ಹೆಸರಿಗೆ ಕ್ರಯ ಪ್ರಕಾರ ಹಕ್ಕುಬದಲಾವಣೆ ಮಾಡಲು ಆದೇಶಿಸಿದೆ.

ಈ ಆದೇಶವನ್ನು ಹೇಳಿ ಬರೆಯಿಸಿ, ಗಣಕೀಕರಣ ಮಾಡಿಸಿ, ತಪ್ಪುಗಳನ್ನು ಸರಿಪಡಿಸಿ, ಈ ದಿನ ದಿನಾಂಕ:20.10.2016 ರಂದು ತೆರದ ನ್ಯಾಯಾಲಯದಲ್ಲಿ ಘೋಷಿಸಿದೆ.

20/10/16

[ವಿ.ಹೆಚ್.ಮಲ್ಲಿಕಾರ್ಜುನ]
**ಉಪ ತಹಶೀಲ್ದಾರರು,**
**ನಾಡ ಕಾರ್ಯಾಲಯ,ಕೋಗಳಿ**
ಕೋಗಳಿ.

ಪ್ರತಿಯನ್ನು:-

8/11/16

1. ಅರ್ಜಿದಾರರು ಮತ್ತು ತಕರಾರುದಾರರಿಗೆ.
2. ಭೂಮಿ ಕೇಂದ್ರ, ತಾಲೂಕು ಕಛೇರಿ, ಹಗರಿಬೊಮ್ಮನಹಳ್ಳಿ ಇವರಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ.
3. ಕಂದಾಯ ನಿರೀಕ್ಷಕರು, ಕೋಗಳಿ.
4. ಶುದ್ಧಪ್ರತಿ ಕಡತಕ್ಕೆ.